# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2440 |
| ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 22.03.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳೆಯರು ಮತ್ತು ಮಕ್ಕಳಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಹಾಗೂ ಅವುಗಳ ಅನುಷ್ಠಾನಕ್ಕಾಗಿ ಕೈಗೊಂಡಿರುವ ಕ್ರಮಗಳೇನು; | ವಿವರವನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. |
| ಆ) | ಈ ಪೈಕಿ ಕೇಂದ್ರ ಸರ್ಕಾರದ ಕಾರ್ಯಕ್ರಮಗಳಾವುವು; ಈ ಕಾರ್ಯಕ್ರಮಗಳ ಪ್ರಕ್ರಿಯೆಗಳು ಯಾವ ಹಂತದಲ್ಲಿವೆ: | ವಿವರವನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಈ ಕಾರ್ಯಕ್ರಮಗಳಿಗಾಗಿ ಒದಗಿಸಲಾದ ಅನುದಾನ ಮತ್ತು ಈವರೆಗೆ ಕಾರ್ಯಕ್ರಮಗಳ ಮೂಲಕ ಸಾಧಿಸಿರುವ ಪ್ರಗತಿಯೇನು? | ವಿವರವನ್ನು ಅನುಬಂಧ-3ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಮಮಇ 43 ಸ್ವೀಮರ 2022

Halappa

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

## ಅನುಬಂಧ-1

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

**ಸಮಗ್ರ ಶಿಶು ಅಭಿವೃದ್ಧಿ ಯೋಜನೆ:**

- **ರಾಜ್ಯ ಐ.ಸಿ.ಡಿ.ಎಸ್. ಘಟಕ,**
- **ಜಿಲ್ಲಾ ಐಸಿಡಿಎಸ್ ಘಟಕ**
- **204 ಶಿಶು ಅಭಿವೃದ್ಧಿ ಯೋಜನೆಗಳು:-**

ಆಡಳಿತ ವೆಚ್ಚದ ಅಡಿಯಲ್ಲಿ ಗೌರವಧನ, ಉಸ್ತುವಾರಿ ಮತ್ತು ಮೌಲ್ಯಮಾಪನ, ಅಂಗನವಾಡಿ ಕೇಂದ್ರದ ಕಟ್ಟಡದ ಬಾಡಿಗೆ, ಶಾಲಾ ಪೂರ್ವ ಶಿಕ್ಷಣಕಿಟ್, ಮೆಡಿಸಿನ್ ಕಿಟ್, ಸಮವಸ್ತ್ರ ಖರೀದಿ ಮುಂತಾದ ಖರ್ಚುಗಳನ್ನು ಭರಿಸಲಾಗುತ್ತಿದೆ. ಸದರಿ ವೆಚ್ಚಗಳನ್ನು 60:40 ಅನುಪಾತದಲ್ಲಿ ಅನುಕ್ರಮವಾಗಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಪತ್ರ ಸಂ:11-36/2016 ಸಿಡಿ-1 ದಿನಾಂಕ: 23-11-2017ರಂತೆ 2018-19ನೇ ಸಾಲಿನ ಡಿಸೆಂಬರ್ ಮಾಹೆಯಿಂದ ಜಿಲ್ಲಾ ಘಟಕದ ನಿರೂಪಣಾಧಿಕಾರಿಗಳು, ಅಂಕಿ ಅಂಶಗಳ ಸಹಾಯಕರು, ಯೋಜನಾ ಕಛೇರಿಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮೇಲ್ವಿಚಾರಕಿಯರ ವೇತನದ ಬಾಬ್ತು ಕೇಂದ್ರ ಸರ್ಕಾರದ ಪಾಲು 25% ಹಾಗೂ ರಾಜ್ಯ ಸರ್ಕಾರದ ಪಾಲು 75% ಆಗಿರುತ್ತದೆ. ಉಳಿದ ಸಿಬ್ಬಂದಿಗಳ ವೇತನದ ಬಾಬ್ತು ಹಾಗೂ ರಾಜ್ಯ ಐಸಿಡಿಎಸ್ ಘಟಕದ ಸಂಪೂರ್ಣ ವೆಚ್ಚ ರಾಜ್ಯ ಸರ್ಕಾರದ ಭರಿಸುತ್ತಿದೆ.

- **<u>ಪೂರಕ ಪೌಷ್ಟಿಕ ಆಹಾರ:</u>**

ಪೂರಕ ಪೌಷ್ಟಿಕ ಆಹಾರಕ್ಕಾಗಿ ರಾಜ್ಯ ಸರ್ಕಾರ ವೆಚ್ಚ ಮಾಡುವ ಮೊತ್ತದ ಶೇ 50% ಕೇಂದ್ರ ಸರ್ಕಾರವು ಮರುಪಾವತಿಸುತ್ತದೆ. ಫಲಾನುಭವಿಗಳು ಪ್ರತಿ ದಿನ ಮನೆಯಲ್ಲಿ ಸೇವಿಸುವ ಆಹಾರಕ್ಕೆ ಪೂರಕವಾಗಿ ಪರಿಷ್ಕೃತ ಮಾರ್ಗಸೂಚಿಯಂತೆ 6 ತಿಂಗಳಿಂದ - 6 ವರ್ಷದ ಮಕ್ಕಳಿಗೆ 500 ಕ್ಯಾಲೊರಿಗಳನ್ನು, 12-15 ಗ್ರಾಂ ಪ್ರೋಟಿನ್, ಗರ್ಭಿಣಿ/ ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ 600 ಕ್ಯಾಲೊರಿಗಳನ್ನು ಮತ್ತು 18-20 ಗ್ರಾಂ ಪ್ರೋಟಿನ್ ಅಲ್ಲದೆ ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ 800 ಕ್ಯಾಲೊರಿಗಳನ್ನು ಮತ್ತು 20-25 ಗ್ರಾಂ ಪ್ರೋಟಿನ್ ನೀಡುವ ಉದ್ದೇಶದಿಂದ ಯೋಜನೆಯಡಿ ಪೂರಕ ಪೌಷ್ಟಿಕ ಅಹಾರ ನೀಡಲಾಗುತ್ತಿದೆ. ಯೋಜನೆಯ ಮಾರ್ಗಸೂಚಿಯಂತೆ ವರ್ಷದಲ್ಲಿ 300 ದಿನಗಳಿಗೆ ಪೂರಕ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ದಿನಾಂಕ: 23-11-2017 ರ ಮಾರ್ಗಸೂಚಿಯಲ್ಲಿ ಸಾಮಾನ್ಯ ಮಕ್ಕಳಿಗೆ ಪ್ರತಿ ದಿನ ರೂ. 8.00 /-ರಂತೆ , ಗರ್ಭಿಣಿ/ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ ಘಟಕ ವೆಚ್ಚ ರೂ. 9.50/-ರಂತೆ ಮತ್ತು ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ ರೂ.12.00 /-ರ ಘಟಕ ವೆಚ್ಚವನ್ನು ಪರಿಷ್ಕರಿಸಲಾಗಿದ್ದು, ಪರಿಷ್ಕೃತ ಘಟಕ ವೆಚ್ಚದಂತೆ ಆಹಾರವನ್ನು ನೀಡಲಾಗುತ್ತಿದೆ.

ರಾಜ್ಯದಲ್ಲಿ 137 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ಇಲಾಖೆಯ ಸಹಾಯದೊಂದಿಗೆ ಕಾರ್ಯನಿರತವಾಗಿದ್ದು, ಇದರಲ್ಲಿ 22-32 ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಇವರುಗಳು ಬಡತನದ ಹಿನ್ನೆಲೆಯಿಂದ ಬಂದವರಾಗಿದ್ದು ವಿಧವೆಯರು, ವಿಕಲಚೇತನರು, ಪರಿತ್ಯಕ್ತ ಮಹಿಳೆಯರು, ಫಲಾನುಭವಿಗಳ ತಾಯಂದಿರು, ಹಾಗೂ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಆಗಿರುತ್ತಾರೆ. ಈ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ತಿನ್ನಲು ಸಿದ್ಧಪಡಿಸಿದ ಆಹಾರ/ಬೇಯಿಸಲು ಸಿದ್ಧವಿರುವ ಆಹಾರ ಪದಾರ್ಥಗಳನ್ನು ವಾರದ 6 ದಿನಗಳು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರತ MSPTC ಮಹಿಳಾ ಪೂರಕ ಪೌಷ್ಟಿಕ ಕೇಂದ್ರಗಳ ಮೂಲಕ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.

- **ಮಾತೃಪೂರ್ಣ ಯೋಜನೆ:**

ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರಿಗೆ ಆಹಾರ ಭದ್ರತೆಯನ್ನು ಒದಗಿಸುವ ಜೊತೆಗೆ ಹೆರಿಗೆ ಸಮಯದಲ್ಲಿನ ಗರ್ಭಿಣಿ ಹಾಗೂ ಶಿಶುಗಳ ಮರಣ ಪ್ರಮಾಣ ಮತ್ತು ಕಡಿಮೆ ತೂಕದ ಮಕ್ಕಳ ಜನನ ನಿಯಂತ್ರಣ ಯೋಜನೆಯ ಉದ್ದೇಶವಾಗಿರುತ್ತದೆ. ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ. ಈ ಒಂದು ಪೂರ್ಣ ಊಟದಿಂದ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿದಿನಕ್ಕೆ ಬೇಕಾಗುವ ಪ್ರೋಟೀನ್ ಮತ್ತು ಕ್ಯಾಲ್ಷಿಯಂ ಕ್ಯಾಲೋರಿ ಅಂಶಗಳಲ್ಲಿ ಶೇ.40-45 (RDA -1342 ಕ್ಯಾಲೋರಿ, 41 ಗ್ರಾಂಪ್ರೋಟೀನ್, 578 ಗ್ರಾಂ ಕ್ಯಾಲ್ಷಿಯಂ) ಗಳಷ್ಟು ಒದಗಿಸಿದಂತಾಗುತ್ತದೆ. ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/-ರ (ರೂ.9.50/- ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಷಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರು ತೂಕವನ್ನು ಪರಿಶೀಲಿಸಲಾಗುತ್ತಿದೆ.

- **ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ತರಬೇತಿ ಕಾರ್ಯಕ್ರಮ**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ತರಬೇತಿ ಕಾರ್ಯಕ್ರಮವು ಐಸಿಡಿಎಸ್ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಬಹು ಪ್ರಾಮುಖ್ಯತೆ ಹೊಂದಿದ್ದು ಐಸಿಡಿಎಸ್‌ನ ಎಲ್ಲಾ ಹಂತದ ಕರ್ಮಚಾರಿಗಳ ಕಾರ್ಯನಿರ್ವಹಣೆಗೆ ಅವಿಭಾಜ್ಯ ಅಂಗವಾಗಿರುತ್ತದೆ. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ನಿಪ್ಸಿಡ್, ದಕ್ಷಿಣ ಪ್ರಾದೇಶಿಕ ಸಂಸ್ಥೆ, ಬೆಂಗಳೂರು ಇಲ್ಲಿ ಹಾಗೂ ಮೇಲ್ವಿಚಾರಕಿಯರಿಗೆ, ದಕ್ಷಿಣ ಕನ್ನಡ ಜಿಲ್ಲೆಯ ಉಜಿರೆಯ ಮಧ್ಯಮಸ್ತರ ತರಬೇತಿ ಕೇಂದದಲ್ಲಿ ವೃತ್ತಿ/ಪುನ:ಶ್ಚೇತನ ತರಬೇತಿ ನೀಡಲಾಗುತ್ತಿದೆ. ಪ್ರಥಮವಾಗಿ ನೇಮಕಗೊಂಡ ಅಂಗನವಾಡಿ ಕಾರ್ಯಕರ್ತೆಯರಿಗೆ 32 ದಿನಗಳ ವೃತ್ತಿ ತರಬೇತಿಯನ್ನು ರಾಜ್ಯದಲ್ಲಿರುವ 21 ಅಂಗನವಾಡಿ ತರಬೇತಿ ಕೇಂದಗಳ ಮೂಲಕ ನೀಡಿ ನಂತರ ಪುನಶ್ಚೇತನ ತರಬೇತಿಯನ್ನು 2 ವರ್ಷಕೊಮ್ಮೆ ನೀಡಲಾಗುತ್ತಿದೆ. ಅಂಗನವಾಡಿ ಸಹಾಯಕಿಯರಿಗೆ ಓರಿಯಂಟೇಷನ್ ಹಾಗೂ ಪುನ:ಶ್ಚೇತನ ತರಬೇತಿಯನ್ನು ಸಹ ಈ ತರಬೇತಿ ಕೇಂದಗಳಲ್ಲಿ ನೀಡಲಾಗುತ್ತಿದೆ. 2013-14 ನೇ ಸಾಲಿನಿಂದ ತರಬೇತಿ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಪರಿಷ್ಕೃತ ಮಾರ್ಗಸೂಚಿಯಂತೆ ಆಯೋಜಿಸಿ, ನಡೆಸಲಾಗುತ್ತಿದೆ.

- **ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಮರಣ ಪರಿಹಾರ ನಿಧಿ:**

ಅಂಗನವಾಡಿ ಕಾರ್ಯಕರ್ತೆ ಹಾಗು ಸಹಾಯಕಿಯರು ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಗೌರವ ಸೇವೆಯ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರು ಸೇವೆಯಲ್ಲಿರುವಾಗ ಮರಣ ಹೊಂದಿದಲ್ಲಿ ಅವರ ಕುಟುಂಬದವರಿಗೆ ಪರಿಹಾರವನ್ನು ಮತ್ತು ತೀವತರವಾದ ಖಾಯಿಲೆಗಳಿಂದ ನರಳುತ್ತಿದ್ದಲ್ಲಿ ಅವರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ರೂ.50,000/- ನೀಡಲಾಗುತ್ತಿದೆ. ಕನಿಷ್ಠ ಒಂದು ವರ್ಷ ಸೇವೆ ಪೂರೈಸಿರುವ ಕಾರ್ಯಕರ್ತೆಯರು/ಸಹಾಯಕಿಯರು ಈ ಆರ್ಥಿಕ ಸಹಾಯಕ್ಕೆ ಅರ್ಹರಿರುತ್ತಾರೆ.

- **ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಂತಿಕೆ ಆಧಾರಿತ ಪಿಂಚಣಿ ಯೋಜನೆ**

ಈ ಯೋಜನೆಯಡಿ 18-55 ವರ್ಷದ ಅಂ.ಕಾರ್ಯಕರ್ತೆ/ಅಂ. ಸಹಾಯಕಿಯರಿಂದ ಕಮವಾಗಿ ರೂ.150 ಹಾಗೂ ರೂ.84 ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ.

- **<u>ಪ್ರಾಯಪೂರ್ವ ಬಾಲಕಿಯರ ಯೋಜನೆ –(SAG)</u>**

ಜೀವನದಲ್ಲಿ ಕಿಶೋರಾವಸ್ಥೆಯು ಮಾನಸಿಕ, ಬೌದ್ಧಿಕ, ಭಾವನಾತ್ಮಕ ಬೆಳವಣಿಗೆಗೆ ಸಂಬಂಧಿಸಿದಂತೆ ಒಂದು ಪ್ರಮುಖ ಅವಧಿಯಾಗಿದೆ. ಹೆಚ್ಚಿನ ರೀತಿಯಲ್ಲಿ ಸೌಲಭ್ಯ ಒದಗಿಸುವುದಕ್ಕಾಗಿ ಹೊಸ ಚಿಂತನೆಯ ರೂಪದಲ್ಲಿ ಕಿಶೋರಿ ಶಕ್ತಿ ಯೋಜನೆ (KSY) ಹಾಗೂ ಸಬಲ ಯೋಜನೆಗಳನ್ನು ವಿಲೀನಗೊಳಿಸಿ ಕೇಂದ್ರ ಸರ್ಕಾರವು 2018–19 ನೇ ಸಾಲಿಗೆ ಸದರಿ ಯೋಜನೆಯನ್ನು ಪ್ರಾಯಪೂರ್ವ ಬಾಲಕಿಯರ ಯೋಜನೆಯನ್ನಾಗಿ ಹೆಸರಿಸಿ ರಾಜ್ಯದ 30 ಜಿಲ್ಲೆಗಳಲ್ಲಿಯೂ ಅನುಷ್ಠಾನಗೊಳಿಸಲಾಗಿದೆ. ಸದರಿ ಯೋಜನೆಯಡಿ 11–14 ವರ್ಷದ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಬಾಲಕಿಯರನ್ನು ಫಲಾನುಭವಿಗಳೆಂದು ಗುರುತಿಸಲಾಗುತ್ತಿದ್ದು, 2020–21ನೇ ಸಾಲಿಗೆ ಜಿಲ್ಲೆಗಳಿಂದ ಪಡೆದ ಮಾಹಿತಿಯಂತೆ 7664 ಫಲಾನುಭವಿಗಳನ್ನು ಗುರುತಿಸಲಾಗಿದೆ. ಈ ಯೋಜನೆಯಡಿ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮ(SNP) ಹಾಗೂ ಪೌಷ್ಟಿಕೇತರ ಅಂಶ ಕಾರ್ಯಕ್ರಮ (Non-Nutrition Components) ಗಳ ಸೇವೆಯನ್ನು ಪ್ರಾಯಪೂರ್ವ ಬಾಲಕಿಯರಿಗೆ ನೀಡಲಾಗುತ್ತಿದೆ.

ಪೂರಕ ಪೌಷ್ಟಿಕ ಆಹಾರ (SNP)ವನ್ನು 11–14 ವರ್ಷದ ಶಾಲೆಯಿಂದ ಹೊರಗೆ ಉಳಿದ ಕಿಶೋರಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ರೂ.9.50/–ರ ಘಟಕ ವೆಚ್ಚದಲ್ಲಿ ಒದಗಿಸಲು ಕೇಂದ್ರ ಸರ್ಕಾರದ ನಿರ್ದೇಶನವಿರುತ್ತದೆ. ಸದರಿ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 50% ಹಾಗೂ ರಾಜ್ಯ ಸರ್ಕಾರದ ಪಾಲು 50% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ.

ಎಲ್ಲಾ ಪೌಷ್ಟಿಕೇತರ ಅಂಶದಡಿ (Non-Nutrition Components) ಕಿಶೋರಿಯರಿಗೆ ಆರೋಗ್ಯ ತಪಾಸಣೆ, ಪೌಷ್ಟಿಕತೆ ಎಲ್ಲಾ ಮತ್ತು ಆರೋಗ್ಯ ಶಿಕ್ಷಣ (NHE) ,ಕುಟುಂಬ ಕಲ್ಯಾಣ, ಮಕ್ಕಳ ಪಾಲನೆ, ಗೃಹ ನಿರ್ವಹಣೆ, ಸಂತಾನೋತ್ಪತ್ತಿ ಮತ್ತು ಎಲ್ಲಾ ಲೈಂಗಿಕ ಎಲ್ಲಾ ಆರೋಗ್ಯ ಜೀವನ ಕೌಶಲ್ಯ ಶಿಕ್ಷಣ, ವೃತ್ತಿಪರ/ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತದೆ. ಸದರಿ ಎಲ್ಲಾ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 60% ಹಾಗೂ ರಾಜ್ಯ ಸರ್ಕಾರದ ಪಾಲು 40% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ.

- **<u>ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ</u>**

2010–11ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದ್ದ ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಐಜಿಎಮ್ಎಸ್‌ವೈ)ಯನ್ನು 2017–18 ನೇ ಸಾಲಿನಿಂದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಎಂಬ ಹೆಸರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ. ಈ ಯೋಜನೆಯು 60:40 ಕೇಂದ್ರ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. ಗರ್ಭಿಣಿ/ಬಾಣಂತಿಯರ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು. ಮೊದಲನೆ ಕಂತು ರೂ.1000/–ಗಳನ್ನು ಗರ್ಭಿಣಿಯಾಗಿ 3 ತಿಂಗಳಲ್ಲಿ, ಎರಡನೇ ಕಂತು ರೂ.2000/– ಗಳನ್ನು ಗರ್ಭಿಣಿಯಾಗಿ 6 ತಿಂಗಳು ಮತ್ತು ಒಂದು ಪ್ರಸವಪೂರ್ವ ಪರೀಕ್ಷೆ ನಂತರ ನೀಡಲಾಗುವುದು. ಮೂರನೇಯ ಕಂತು ರೂ.2000/– ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3 ಕಂತುಗಳಲ್ಲಿ ರೂ.5000/– ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್‌ಆರ್‌ಹೆಚ್‌ಎಮ್ ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೂ ಸಹ ಅರ್ಹರಾಗಿರುತ್ತಾರೆ.

- **<u>ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆ</u>**

ರಾಷ್ಟ್ರೀಯ ಶಿಶು ಪಾಲನಾ ಕೇಂದ್ರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪಾಲು ಅನುಕ್ರಮವಾಗಿ 60:30:10 ಅನುಪಾತದಂತೆ ಅನುದಾನವನ್ನು ಒದಗಿಸಲಾಗಿರುತ್ತದೆ. ನವೀಕೃತಗೊಂಡ ಈ ಯೋಜನೆಯು 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪ್ರಾರಂಭಿಕ ಬಾಲ್ಯಾವಸ್ಥೆಯ ಸೇವೆಗಳನ್ನು ನೀಡುವಲ್ಲಿ ಮಹತ್ವಪೂರ್ಣ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುತ್ತದೆ. ಉದ್ಯೋಗಸ್ಥ ತಾಯಂದಿರು ತಮ್ಮ ಕೆಲಸದ

ಅವಧಿಯಲ್ಲಿ ಮಕ್ಕಳ ಸಮಗ್ರ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರದಲ್ಲಿ ತಮ್ಮ ಮಕ್ಕಳನ್ನು ಕಳುಹಿಸಲು ಅನುಕೂಲವಾಗುತ್ತದೆ.

**ಉದ್ದೇಶಗಳು:**

- ಉದ್ಯೋಗಸ್ಥ ತಾಯಂದಿರ 6 ತಿಂಗಳಿಂದ 6 ವರ್ಷದ ಮಕ್ಕಳನ್ನು ದಿನಪೂರ್ತಿ ಸುರಕ್ಷಿತವಾಗಿ ನೋಡಿಕೊಳ್ಳುವುದು.
- ಮಕ್ಕಳ ಪೌಷ್ಠಿಕ ಹಾಗೂ ಆರೋಗ್ಯಮಟ್ಟವನ್ನು ಸುಧಾರಿಸುವುದು.
- ಮಕ್ಕಳ ಭೌತಿಕ, ಸಾಮಾಜಿಕ, ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು
- ಮಕ್ಕಳನ್ನು ಕಾಳಜಿಯಿಂದ ನೋಡಿಕೊಳ್ಳುವಂತೆ ತಾಯಂದಿರಿಗೆ ಹಾಗೂ ಪೋಷಕರಿಗೆ ಶಿಕ್ಷಣ ನೀಡುವುದು

**ಸೇವೆಗಳು:**

- ದಿನದ ಆರೈಕೆ, ವಿಶ್ರಾಂತಿ ಸೌಲಭ್ಯ ಒಳಗೊಂಡಿರುತ್ತದೆ.
- 0–3 ವರ್ಷದ ಮಕ್ಕಳಿಗೆ ಪ್ರಾಥಮಿಕ ಉತ್ತೇಜನ ನೀಡುವುದು ಹಾಗೂ 3–6 ವರ್ಷದ ಮಕ್ಕಳಿಗೆ ಶಾಲಾಪೂರ್ವ ಶಿಕ್ಷಣ ನೀಡುವುದು.
- ಪೂರಕ ಪೌಷ್ಠಿಕ ಆಹಾರ.
- ಬೆಳವಣಿಗೆ ಪರಿಶೀಲನೆ.
- ಆರೋಗ್ಯ ತಪಾಸಣೆ ಮತ್ತು ಚುಚ್ಚುಮದ್ದು

- **ಅಂಗನವಾಡಿ ಕಟ್ಟಡಗಳ ನಿರ್ಮಾಣ (ನಬಾರ್ಡ್ ನೆರವು)**

ಅಂಗನವಾಡಿ ಕೇಂದ್ರ ನಡೆಸಲು ಕಟ್ಟಡದ ತೀವ್ರ ಅವಶ್ಯಕತೆಯನ್ನು ಮನಗಂಡು ನಬಾರ್ಡ್ ಸಂಸ್ಥೆಯು ಕಟ್ಟಡ ಕಟ್ಟಲು ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡುತ್ತಿದೆ. ನಬಾರ್ಡ್ ಸಂಸ್ಥೆಯು ಶೇಕಡ 85ರಷ್ಟು ಪಾಲನ್ನು ಕಟ್ಟಡ ನಿರ್ಮಾಣಕ್ಕಾಗಿ ನೀಡುತ್ತದೆ ಹಾಗೂ ಉಳಿದ ಶೇಕಡ 15 ರಷ್ಟನ್ನು ರಾಜ್ಯ ಸರ್ಕಾರವು ನೀಡುತ್ತದೆ. ನಬಾರ್ಡ್ ಸಂಸ್ಥೆಯ ಸಾಲವನ್ನು ಸರ್ಕಾರವು 7 ವರ್ಷಗಳ ಒಳಗಾಗಿ ಹಿಂತಿರುಗಿಸಬೇಕಾಗುತ್ತದೆ.

- **ವಿಶೇಷ ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕಟ್ಟಡಗಳ ನಿರ್ಮಾಣ:**

ಪ್ರಾದೇಶಿಕ ಅಸಮಾನತೆಯ ಬಗ್ಗೆ ನಂಜುಂಡಪ್ಪ ವರದಿಯಲ್ಲಿ 114 ಹಿಂದುಳಿದ/ಅತಿ ಹಿಂದುಳಿದ /ಅತ್ಯಂತ ಹಿಂದುಳಿದ ತಾಲ್ಲೂಕುಗಳನ್ನು ಗುರುತಿಸಲಾಗಿದೆ. ವಿಶೇಷ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಈ ತಾಲ್ಲೂಕುಗಳ/ಜಿಲ್ಲೆಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಆದ್ಯತೆ ನೀಡಲಾಗುತ್ತಿದೆ.

- **ಅಂಗನವಾಡಿ ಕಟ್ಟಡಗಳ ನಿರ್ವಹಣೆ (ಜಿಲ್ಲಾ ವಲಯ ಕಾರ್ಯಕ್ರಮ)**

ಜಿಲ್ಲಾ ವಲಯ ತಾಲ್ಲೂಕು ಪಂಚಾಯತ್ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

- **ಅಂಗನವಾಡಿಗಳ ನಿರ್ವಹಣೆ: (ರಾಜ್ಯ ವಲಯ)**

ರಾಜ್ಯ ವಲಯ ಕಾರ್ಯಕ್ರಮದಡಿ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

- **ಅಂಗನವಾಡಿ ಕಟ್ಟಡಗಳ ಉನ್ನತೀಕರಣ (ರಾಜ್ಯ ವಲಯ)**

ಅಂಗನವಾಡಿ ಕಟ್ಟಡಗಳ ಉನ್ನತೀಕರಣಕ್ಕಾಗಿ ಕೇಂದ್ರ & ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

- **ಅಂಗನವಾಡಿ ಕಟ್ಟಡಗಳ ನಿರ್ಮಾಣ (ನರೇಗಾ)**

ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕಾಗಿ ನರೇಗಾ ಸಹಯೋಗದೊಂದಿಗೆ ಪ್ರತಿ ಕಟ್ಟಡಕ್ಕೆ ರೂ.10.00 ಲಕ್ಷ ಘಟಕ (ನರೇಗಾದ ಪಾಲು ರೂ.5.00 ಲಕ್ಷ, ರಾಜ್ಯದ ಪಾಲು ರೂ.4.00 ಲಕ್ಷ ಹಾಗೂ ಕೇಂದ್ರದ ಪಾಲು ರೂ.1.00 ಲಕ್ಷ) ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

* **ನಗರ ಪ್ರದೇಶದ ಅಂಗನವಾಡಿ ಕೇಂದ್ರಗಳ ಮೇಲ್ದರ್ಜೀಕರಣ:**

ನಗರ ಪ್ರದೇಶಗಳಲ್ಲಿ ಜನ ಸಾಂದ್ರತೆ ಹೆಚ್ಚಾಗಿರುವುದರಿಂದ ಐಸಿಡಿಎಸ್ ವ್ಯಾಪ್ತಿಗೆ ಒಳಪಡದೆ ಇರುವ ಪ್ರದೇಶಗಳಲ್ಲಿರುವ ಎಲ್ಲಾ ಫಲಾನುಭವಿಗಳಿಗೆ ಐಸಿಡಿಎಸ್ ಯೋಜನೆಯ ಸೇವೆಗಳನ್ನು ತಲುಪಿಸುವ ನಿಟ್ಟಿನಲ್ಲಿ ನಗರ ಪ್ರದೇಶಗಳಲ್ಲಿ ಹೆಚ್ಚುವರಿಯಾಗಿ 2017–18ನೇ ಸಾಲಿಗೆ 100 ಕೊಳಗೇರಿ ಅಂಗನವಾಡಿ ಕೇಂದ್ರಗಳು, 2018–19ನೇ ಸಾಲಿನಲ್ಲಿ 250 ನಗರ ಪ್ರದೇಶಗಳಲ್ಲಿ ಹಾಗೂ 2019–20ನೇ ಸಾಲಿಗೆ 100 ನಗರ ಪ್ರದೇಶದ ಅಂಗನವಾಡಿ ಕೇಂದ್ರಗಳನ್ನು ಒಳಗೊಂಡಂತೆ ಒಟ್ಟು 450 ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಸದರಿ 450 ಅಂಗನವಾಡಿ ಕೇಂದ್ರಗಳು ನಗರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳನ್ನು ಶಿಶುಪಾಲನಾ ಕೇಂದ್ರಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿದೆ.

* **ರಾಷ್ಟ್ರೀಯ ಪೌಷ್ಟಿಕತೆ ಅಭಿಯಾನ –ಪೋಷಣ್ ಅಭಿಯಾನ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಫಲಾನುಭವಿಗಳ ಗುರಿಯನ್ನಾಧರಿಸಿ ಎಲ್ಲಾ ಪೌಷ್ಟಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆ ಇದಾಗಿದೆ. ಮುಖ್ಯವಾಗಿ ಮುಂದಿನ 3 ವರ್ಷಗಳಲ್ಲಿ 0–6 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಟಿಕತೆಯ ಸ್ಥಿತಿಯನ್ನು ನಿರ್ದಿಷ್ಟ ಅವಧಿಗೆ ಅನುಗುಣವಾಗಿ ಸುಧಾರಿಸುವುದು ಈ ಯೋಜನೆಯ ಮುಖ್ಯವಾದ ಗುರಿಯಾಗಿದೆ. 8ನೇ ಮಾರ್ಚ್ 2018ಕ್ಕೆ ಪ್ರಾರಂಭವಾಗಿರುವ ಈ ಯೋಜನೆಯನ್ನು ಮುಂದಿನ 3 ವರ್ಷಗಳಿಗೆ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ತರುವ ಮೂಲಕ ಪೌಷ್ಟಿಕತೆ ವಿಷಯದಲ್ಲಿ ಸಮಗ್ರವಾದ ಬದಲಾವಣೆ ದೂರದೃಷ್ಟಿಯನ್ನು ಹೊಂದಲಾಗಿದೆ.

**ಉದ್ದೇಶಗಳು:**

- 0–6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ)
- 0–6 ವರ್ಷದ ಮಕ್ಕಳಲ್ಲಿನ ಅಪೌಷ್ಟಿಕತೆಯ (ಕಡಿಮೆ ತೂಕದ ಸರಾಸರಿ ಪ್ರಮಾಣ) ಕಡಿಮೆಗೊಳಿಸವುದು (ವರ್ಷಕ್ಕೆ ಶೇಕಡಾ 2 ರಂತೆ)
- 6 ತಿಂಗಳಿಂದ 59 ತಿಂಗಳವರೆಗಿನ ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣ ಕಡಿಮೆಗೊಳಿಸುವುದು
- 15 ರಿಂದ 49 ವಯಸ್ಸಿನ ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು. (ವರ್ಷಕ್ಕೆ ಶೇಕಡಾ 3 ರಂತೆ)
- ಕಡಿಮೆ ತೂಕದ ಜನನಗಳ ಪ್ರಮಾಣವನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ)

* **ಅಂಗನವಾಡಿ ಕಟ್ಟಡಗಳ ನಿರ್ಮಾಣ (ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ):–**

ಸದರಿ ಯೋಜನೆಯಡಿ ಕಳೆದ ಸಾಲುಗಳಲ್ಲಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತವನ್ನು ಇಲಾಖೆಯ ಬಂಡಾವಳ ಲೆಕ್ಕ ಶೀರ್ಷಿಕೆಯಡಿ ಒದಗಿಸಲಾಗುವುದು. ಸದರಿ ಅನುದಾನದಲ್ಲಿ ಅನುಮೋದನೆಗೊಂಡ ಕ್ರಿಯಾ ಯೋಜನೆಗೆ ಅನುಗುಣವಾಗಿ ಎಸ್.ಸಿ. ಮತ್ತು ಎಸ್.ಟಿ. ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಿಸಲು ಕ್ರಮವಹಿಸಲಾಗುವುದು.

• **"ಸ್ತ್ರೀಶಕ್ತಿ ಯೋಜನೆ" :**

ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ತರುವ ಉದೇಶದಿಂದ **"ಸ್ತ್ರೀಶಕ್ತಿ ಯೋಜನೆ"** ಯನ್ನು ರಾಜ್ಯದಲ್ಲಿ ಅಕ್ಟೋಬರ್ 2000 ರಿಂದ ಜಾರಿಗೊಳಿಸಲಾಗಿದೆ. ಸ್ತ್ರೀಶಕ್ತಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಸ್ತ್ರೀಶಕ್ತಿ ಗುಂಪುಗಳಿಗೆ ಸುತ್ತುನಿಧಿ, ಸ್ತ್ರೀಶಕ್ತಿ ಗುಂಪುಗಳ ಸದಸ್ಯರಿಗೆ ತರಬೇತಿ, ಅಧಿಕ ಉಳಿತಾಯ ಮಾಡಿದ ಗುಂಪುಗಳಿಗೆ ಪ್ರೋತ್ಸಾಹಧನ, ಆದಾಯೋತ್ಪನ್ನ ಚಟುವಟಿಕೆಗಳಲ್ಲಿತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹಧನ, ಸ್ತ್ರೀಶಕ್ತಿ ಗುಂಪುಗಳು ಉತ್ಪಾದಿಸಿದ ವಸ್ತುಗಳಿಗೆ ಜಿಲ್ಲಾ/ವಿಭಾಗೀಯ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಸ್ತ್ರೀಶಕ್ತಿ ಸಮಾವೇಶ ಮತ್ತು ಸ್ತ್ರೀಶಕ್ತಿ ಗುಂಪು/ಒಕ್ಕೂಟಗಳಿಗೆ ಪ್ರಶಸ್ತಿ, ಸ್ತ್ರೀಶಕ್ತಿ ಮಹಿಳೆಯರ ತರಬೇತಿಗಾಗಿ ತಾಲ್ಲೂಕು/ಜಿಲ್ಲಾ ಮತ್ತು ವಿಭಾಗೀಯ ಮಟ್ಟದಲ್ಲಿ ಸ್ತ್ರೀಶಕ್ತಿ ಭವನಗಳನ್ನು ನಿರ್ಮಿಸಲಾಗಿದೆ.

• **ಸಾಂತ್ವನ ಯೋಜನೆ**

ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ 181 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 17208 ಮಹಿಳೆಯರು ಈ ಯೋಜನೆಯಿಂದ ಸಮಾಲೋಚನೆ ಪಡೆದಿರುತ್ತಾರೆ.

• **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006**

ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾಯ್ದೆಯಡಿ 6789 ಪ್ರಕರಣಗಳು ದಾಖಲಾಗಿರುತ್ತದೆ.

• **ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ**

ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಹಾಗೂ ಇನ್ನಿತರ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗಲು ಬೆಂಗಳೂರಿಗೆ ಬರುವ ಮಹಿಳೆಯರಿಗೆ ಸುರಕ್ಷಿತ ಆಶ್ರಯ, ರಕ್ಷಣೆ ಹಾಗೂ ಇನ್ನಿತರ ಅಂಶಗಳನ್ನು ಪರಿಗಣಿಸಿ ರಾಜ್ಯ ಸರ್ಕಾರವು ಅವರಿಗೆ ಟ್ರಾನ್ಸಿಟ್ 11 ಹಾಸ್ಟೆಲ್‌ಗಳನ್ನು ಪ್ರಾರಂಭಿಸಲಾಗಿದೆ.

• **ಸ್ವಾಧಾರಗೃಹ : ಸಂಕಷ್ಟಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಯೋಜನೆ (ಕೇಂದ್ರ:60% –ರಾಜ್ಯ:40%)**

ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಆಶಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ರಾಜ್ಯದಲ್ಲಿ ಪ್ರಸ್ತುತ 52 ಸ್ವಾಧಾರಗೃಹ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 1725 ಮಹಿಳೆಯರು ಮತ್ತು ಮಕ್ಕಳು ಆಶ್ರಯ ಪಡೆದಿರುತ್ತಾರೆ.

• **ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ನಿರ್ಮಾಣ ಹಾಗೂ ವಿಸ್ತರಣೆಗಾಗಿ ಅನುದಾನ ಯೋಜನೆ**

ಉದ್ಯೋಗಸ್ಥ ಮಹಿಳೆಯರಿಗೆ, ಹಾಗೂ ಉದ್ಯೋಗಕ್ಕಾಗಿ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ (ಒಂದು ವರ್ಷಕ್ಕೆ ಮೀರದಂತೆ) ಕಡಿಮೆ ಬೆಲೆಯಲ್ಲಿ ಹಾಗೂ ಸುರಕ್ಷಿತವಾದಂತಹ ವಸತಿ ನಿಲಯಗಳನ್ನು ಒದಗಿಸುವುದಕ್ಕೋಸ್ಕರ ವಸತಿ ಗೃಹಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು. ಯೋಜನೆಯ ಹೊಸ ಮಾರ್ಗಸೂಚಿಯನ್ವಯ ವಸತಿಗೃಹ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರದಿಂದ ವಸತಿಗೃಹದ ನಿರ್ಮಾಣದ ವೆಚ್ಚದಲ್ಲಿ ಶೇ.10ರಷ್ಟು ಅನುದಾನವನ್ನು ನೀಡಲಾಗುವುದು. ಉಳಿದ ಶೇ.25ರಷ್ಟು ಅನುದಾನವನ್ನು ಸ್ವಯಂಸೇವಾ ಸಂಸ್ಥೆ ಭರಿಸಬೇಕಾಗಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ 66 ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿದೆ. 2021–22ನೇ ಸಾಲಿನಲ್ಲಿ ಈ ಯೋಜನೆಗೆ ಅನುದಾನ ನಿಗದಿಯಾಗಿರುವುದಿಲ್ಲ.

• **ಸಖಿ–ಒನ್ ಸ್ಟಾಪ್ ಸೆಂಟರ್ (ಕೇಂದ್ರ–100%)**

ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು ಭಾರತ

ಸರ್ಕಾರವು ಮೊದಲನೇ ಹಂತದಲ್ಲಿ ದೇಶಾದ್ಯಂತ ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್‌ನ್ನು ಸ್ಥಾಪಿಸಲು ಉದ್ದೇಶಿಸಿರುತ್ತದೆ. ಅದರಂತೆ, ಪ್ರಸ್ತುತ 30 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ.

- **ಭಾಗ್ಯಲಕ್ಷ್ಮಿ –ಸುಕನ್ಯಾ ಸಮೃದ್ಧಿ ಖಾತೆ ಯೋಜನೆ:**

ಬಡತನ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿ ಜನಿಸಿದ 2 ಹೆಣ್ಣು ಮಕ್ಕಳಿಗೆ ಆರ್ಥಿಕ ಸೌಲಭ್ಯವನ್ನು ನೀಡಲಾಗುವುದು. ಹೆಣ್ಣು ಮಗು ಜನಿಸಿದ 2 ವರ್ಷಗಳ ವರೆಗೆ ನೋಂದಣಿ ಮಾಡಲು ಕಾಲಾವಕಾಶವಿರುತ್ತದೆ. ಈ ಯೋಜನೆಯಡಿ ಬಿಪಿಎಲ್ ಕುಟುಂಬದ 2 ಹೆಣ್ಣು ಮಕ್ಕಳಿಗೆ ಪ್ರತಿ ಮಗುವಿನ ಹೆಸರಿನಲ್ಲಿ ವಾರ್ಷಿಕ ರೂ.3000/– ರಂತೆ 15 ವರ್ಷಗಳವರೆಗೆ ಒಟ್ಟು ರೂ.45,000/–ಗಳನ್ನು ಠೇವಣಿ ಹೂಡಲಾಗುತ್ತದೆ. 21 ವರ್ಷ ಅವಧಿ ಪೂರ್ಣಗೊಂಡ ನಂತರ ಅಂದಾಜು ಪರಿಪಕ್ವ ಮೊತ್ತ ರೂ.1.27 ಲಕ್ಷ ಪ್ರಸ್ತುತ ಬಡ್ಡಿ ಸೇರಿದಂತೆ ನೀಡಲಾಗುತ್ತದೆ. 10ನೇ ತರಗತಿ ನಂತರ ಉನ್ನತ ವಿದ್ಯಾಭ್ಯಾಸಕ್ಕಾಗಿ ಖಾತೆಯಲ್ಲಿರುವ ಮೊತ್ತದ ಶೇ.50ರಷ್ಟು ಭಾಗವನ್ನು ಹಿಂಪಡೆಯಲು ಅವಕಾಶವಿರುತ್ತದೆ.

- **ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ :**

ಈ ಯೋಜನೆಯನ್ನು 2006–07ರಲ್ಲಿ ಜಾರಿಗೆ ತರಲಾಗಿದೆ. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕುರಿತು ಇಲಾಖಾ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯ, ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟಗಳಲ್ಲಿ ಸಮಿತಿಗಳು ಕಾರ್ಯ ನಿರ್ವಹಿಸುತ್ತಿವೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ಮತ್ತು ಸಾಗಣಿಕೆಗೆ ಒಳಪಟ್ಟ ಮಹಿಳೆಯರ ಮತ್ತು ಮಕ್ಕಳ ಪುನರ್ವಸತಿ ಮಾಡುವುದು ನಾಗರೀಕ ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ.

- **ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ :**

ಈ ಯೋಜನೆಯು 2006–07ನೇ ಸಾಲಿನಿಂದ ಜಾರಿಗೆ ತರಲಾಗಿದೆ. 6–14 ವರ್ಷದ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ. 10,000/–ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿ.ಯು.ಸಿ ಪೂರೈಸುವವರೆಗೂ (18 ವರ್ಷದ ಮಿತಿಯೊಳಗೆ) ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2,000/–ಗಳ ಶಿಷ್ಯವೇತನವನ್ನು ನೀಡಲಾಗುವುದು.

- **ಉಜ್ವಲ ಯೋಜನೆ :**

ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ರೂಪಿಸಿರುವ ಸಮಗ್ರ ಯೋಜನೆಯಾಗಿರುತ್ತದೆ. ಸದರಿ ಯೋಜನೆಯು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಪ್ರಸ್ತುತ 14 ಉಜ್ವಲ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

- **ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ :**

ಸನ್ಮಾನ್ಯ ಪ್ರಧಾನ ಮಂತ್ರಿಗಳು "ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ" ಎಂಬ ಹೊಸ ಯೋಜನೆಯನ್ನು 22 ಜನವರಿ 2015ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, "ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆಯ ಮುಖ್ಯ ಉದೇಶವಾಗಿರುತ್ತದೆ. ಈ ಯೋಜನೆಯನ್ನು 2018–19 ರ ಸಾಲಿನಲ್ಲಿ ವಿಜಯಪುರ ಜಿಲ್ಲೆಯ ಜೊತೆಗೆ 4 ಜಿಲ್ಲೆಗಳಾದ ಬಾಗಲಕೋಟೆ, ಹಾವೇರಿ, ಗದಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ.

- **ಬಾಲ್ಯವಿವಾಹ ನಿಷೇಧ ಕಾಯ್ದೆಯ** ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಪ್ರಸ್ತುತ ಸಾಲಿನಲ್ಲಿ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

- ಬಾಲ್ಯವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ಅಧಿನಿಯಮ-2016ರ ಸುಗಮ ಅನುಷ್ಠಾನಕ್ಕಾಗಿ ಕರ್ನಾಟಕ ನಿಯಮಗಳನ್ನು ತಿದ್ದುಪಡಿ ಮಾಡುವ ಸಲುವಾಗಿ ಸಮಿತಿಯನ್ನು ರಚಿಸಲಾಗಿದೆ.
- ಓಈಊಂ ಸರ್ವೆ ಪ್ರಕಾರ ಬಾಲ್ಯವಿವಾಹ ಹೆಚ್ಚಾಗಿರುವ 9 ಜಿಲ್ಲೆಗಳಲ್ಲಿ ಹಾಗೂ ಉಳಿದ 17 ಜಿಲ್ಲೆಗಳಲ್ಲಿಯೂ ಸಹ ಒಂದು ತಿಂಗಳವರೆಗೆ ಬಾಲ್ಯವಿವಾಹ ನಿಷೇಧ ಕಾಯ್ದೆಯ ಕುರಿತು ಅರಿವು ಮೂಡಿಸಲು 911 ಬಸ್ ಬ್ರ್ಯಾಂಡಿಂಗ್ ಮಾಡಲಾಗಿದೆ.
- ಕ್ರಮಬದ್ಧ ಕಾರ್ಯವಿಧಾನ (ಎಸ್.ಓ.ಪಿ) ಮಾರ್ಗ ಸೂಚಿಗಳನ್ನು ಮುದ್ರಿಸಲು ಕ್ರಮವಹಿಸಲಾಗುತ್ತಿದೆ.
- ಬಾಗಲಕೋಟೆ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಎನ್.ಐ.ಸಿ ಇವರು ಅಭಿವೃದ್ಧಿ ಪಡಿಸಿರುವ "ಸುರಕ್ಷಿಣಿ ಪೋರ್ಟಲ್"ನ್ನು ರಾಜ್ಯಾದ್ಯಂತ ವಿಸ್ತರಿಸಲು ಕ್ರಮವಹಿಸಲಾಗುತ್ತಿದೆ.
- ಬಾಲ್ಯವಿವಾಹ ನಿಷೇಧದ ಬಗ್ಗೆ ರಾಜ್ಯಾದ್ಯಂತ ಆಂದೋಲನದ ರೂಪದಲ್ಲಿ "ಬಾಲ್ಯವಿವಾಹ ನಿಷೇಧ ಅಭಿಯಾನ" ಎಂಬ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ವಾರ್ತಾ ಮತ್ತು ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ "ವಿಡಿಯೋ ಆನ್ ವಿಲ್ಸ್" ವಾಹನಗಳ ಮೂಲಕ 788 ಹೋಬಳಿಗಳಲ್ಲಿ 3000 ಪ್ರದರ್ಶನಗಳನ್ನು ಮತ್ತು 7 ಬಿಬಿಎಂಪಿ ವಲಯಗಳಲ್ಲಿ 350 ಪ್ರದರ್ಶನಗಳನ್ನು ಏರ್ಪಡಿಸುವ ಮೂಲಕ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲು ಕ್ರಮವಹಿಸಲಾಗಿದೆ. ಇದಲ್ಲದೆ ಮಾನವ ಸರಪಳಿ ನಿರ್ಮಾಣ, ಸಹಿ ಕ್ಯಾಂಪೇನ್, ಪ್ರತಿಜ್ಞಾ ಸ್ವೀಕಾರದ ಮೂಲಕ ಸಾರ್ವಜನಿಕರ ಜವಾಬ್ದಾರಿಗಳ ಬಗ್ಗೆ ಜಾಗೃತಿ ಮೂಡಿಸಲು ಕ್ರಮವಹಿಸಲಾಗಿದೆ.

- **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ:**

ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸದರಿ ಕಾರ್ಯಕ್ರಮವು ಜಿಲ್ಲೆಗಳಲ್ಲಿ ಉಪನಿರ್ದೇಶಕರು ಹಾಗೂ ಸಂಸ್ಥೆಗಳ ಅಧೀಕ್ಷಕರುಗಳ ಮೂಲಕ ಅನುಷ್ಠಾನಗೊಳಿಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ಅಲ್ಪಾವಧಿ ಪುನರ್ವಸತಿ ಕೇಂದ್ರಗಳು ಹಾಗೂ ರಾಜ್ಯ ಮಹಿಳಾ ನಿಲಯಗಳು ದೀರ್ಘಾವಧಿ ಪುನರ್ವಸತಿ ಕೇಂದ್ರಗಳಾಗಿರುತ್ತವೆ. ಆಶ್ರಯ ಮತ್ತು ರಕ್ಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೋಲೀಸರ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ನ್ಯಾಯಾಲಯಾದ್ಯಂತ ದಾಖಲಿಸ್ಪಟ್ಟ ಮಹಿಳೆಯರು ದಾಖಲಾಗುತ್ತಾರೆ.ಮಹಿಳೆಯರಿಗೆ ಆಶ್ರಯ, ರಕ್ಷಣೆ, ಪೌಷ್ಠಿಕ ಆಹಾರ, ವೈದ್ಯೋಪಚಾರ, ಕೌಶಲ್ಯಾಭಿವೃದ್ಧಿ ತರಬೇತಿ ಮತ್ತು ವೃತ್ತಿ ತರಬೇತಿ ನೀಡುವುದರ ಮೂಲಕ ಉದ್ಯೋಗಾವಕಾಶ ಮತ್ತು ಸ್ವ-ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ.

- **ನಿರ್ಗತಿಕ ಮಕ್ಕಳ ಕುಟೀರ:-**

ಅನಾಥ ಮತ್ತು ನಿರ್ಗತಿಕ ಮಕ್ಕಳ ಪಾಲನೆ/ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಕಾರ್ಯಕ್ರಮವು ಜಿಲ್ಲೆಗಳಲ್ಲಿ ಉಪ ನಿರ್ದೇಶಕರುಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇವರುಗಳ ಮೇಲ್ವಿಚಾರಣೆಗಳಲ್ಲಿ ಅನುಷ್ಠಾನಗೊಳ್ಳುತ್ತಿದ್ದು, ಈ ಯೋಜನೆಯಡಿ ಕನಿಷ್ಠ 3 ವರ್ಷ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಿರುವ ನೊಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಮಕ್ಕಳ ಒಂದು ಘಟಕದಂತೆ ಪಾಲನೆ ಹಾಗೂ ಪೋಷಣೆಗೆ ನಿರ್ಗತಿಕ ಮಕ್ಕಳ ಕುಟೀರವನ್ನು ತೆರೆಯಲು ಸರ್ಕಾರದ ಅನುಮತಿಯೊಂದಿಗೆ ಧನ ಸಹಾಯವನ್ನು ನೀಡಲಾಗುವುದು. ಈ ಯೋಜನೆಯಡಿ ಪ್ರತಿ ಮಗುವಿನ ನಿರ್ವಹಣೆಗಾಗಿ ಮಾಸಿಕ ರೂ.1000/-ಗಳ ಅನುದಾನವನ್ನು ಕೊಡಲಾಗುತ್ತದೆ. 27 ಜಿಲ್ಲೆಗಳಲ್ಲಿ 128 ಸ್ವಯಂಸೇವಾ ಸಂಸ್ಥೆಗಳ ಮೂಲಕ 244 ಕುಟೀರಗಳು ಕಾರ್ಯನಿರ್ವಹಿಸುತ್ತಿವೆ.

- **ಬಾಲಕಿಯರ ವಸತಿ ನಿಲಯ:-**

ಗ್ರಾಮಾಂತರ ಪ್ರದೇಶದ ಹೆಣ್ಣು ಮಕ್ಕಳು ಉನ್ನತ ಶಿಕ್ಷಣ ಪಡೆಯಲು ಅವಕಾಶ ಮಾಡಿಕೊಡಲು ಇಲಾಖಾವತಿಯಿಂದ ಹಿಂದುಳಿದ ಪ್ರದೇಶಗಳಲ್ಲಿ ಬಾಲಕಿಯರ ವಸತಿ ನಿಲಯಗಳನ್ನು ನಡೆಸಲಾಗುತ್ತಿದೆ. ಸದರಿ ಕಾರ್ಯಕ್ರಮವು ಜಿಲ್ಲೆಗಳಲ್ಲಿ ಉಪ ನಿರ್ದೇಶಕರುಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇವರುಗಳ ಮೇಲ್ವಿಚಾರಣೆಗಳಲ್ಲಿ ಅನುಷ್ಠಾನಗೊಳ್ಳುತ್ತಿದ್ದು, ಸರ್ಕಾರ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯಲ್ಲಿ 6ನೇ ತರಗತಿ ಮೇಲ್ಪಟ್ಟು ಮೆಟ್ರಿಕ್ ನಂತರದ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಗ್ರಾಮಾಂತರ ಪ್ರದೇಶದಲ್ಲಿ ವಾಸವಾಗಿರುವ

ಹಾಗೂ ವಾರ್ಷಿಕ ವರಮಾನ ರೂ.10,000/- ಮೀರದ ಕುಟುಂಬದಲ್ಲಿನ ಹೆಣ್ಣು ಮಕ್ಕಳಿಗೆ ಈ ವಸತಿ ನಿಲಯಗಳಲ್ಲಿ ಪ್ರವೇಶ ಅವಕಾಶ ಲಭ್ಯವಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ 37 ಬಾಲಕಿಯರ ವಸತಿ ನಿಲಯಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಕಾರ್ಯ ನಿರ್ವಹಿಸುತ್ತಿದ್ದು, ಅದರಲ್ಲಿ 19 ಮೆಟ್ರಿಕ್ ಪೂರ್ವ ವಸತಿ ನಿಲಯಗಳು ಹಾಗೂ 18 ಮೆಟ್ರಿಕ್ ನಂತರದ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.

**ಅನುಷ್ಠಾನಕ್ಕಾಗಿ ಕೈಗೊಂಡ ಕ್ರಮಗಳು:-** ಮೇಲೆ ವಿವರಿಸಿರುವ ಎಲ್ಲಾ ಕಾರ್ಯಕ್ರಮಗಳು ಇಲಾಖೆಯ ಮುಂದುವರೆದ ಕಾರ್ಯಕ್ರಮಗಳಾಗಿದ್ದು, ಸದರಿ ಯೋಜನೆಗಳ ಅನುಷ್ಠಾನಕ್ಕಾಗಿ ಸಂಬಂಧಿಸಿದಂತೆ ಪ್ರತಿ ಆರ್ಥಿಕ ಸಾಲಿನಲ್ಲಿ ಹಂಚಿಕೆಯಾಗುವ ಅನುದಾನಕ್ಕೆ ಅನುಗುಣವಾಗಿ ಯೋಜನೆಗಳ ಮುಂದುವರಿಕೆ ಆದೇಶವನ್ನು ಸರ್ಕಾರದಿಂದ ಪಡೆದು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಅನುಮೋದನೆಯನ್ನು ಪಡೆದು. ಅನುಮೋದಿತಾ ಕ್ರಿಯಾ ಯೋಜನೆಗೆ ಅನುಗುಣವಾಗಿ ವೆಚ್ಚ ಭರಿಸಲು ಕ್ರಮವಹಿಸಲಾಗುತ್ತಿದೆ.

**ಸ್ಥಗಿತಗೊಂಡಿರುವ ಯೋಜನೆಗಳು:-** 2020-21 ನೇ ಸಾಲಿನಿಂದ ಮಾತೃಶ್ರೀ ಯೋಜನೆಯನ್ನು ಹಾಗೂ 2021-22ನೇ ಸಾಲಿನಿಂದ ಅಪೌಷ್ಟಿಕ ಮಕ್ಕಳ ವೈದ್ಯಕೀಯ ವೆಚ್ಚವನ್ನು ಆರ್ಥಿಕ ಇಲಾಖೆಯ ಸೂಚನೆಯಂತೆ ಸ್ಥಗಿತಗೊಳಿಸಲಾಗಿದೆ.

# ಮಕ್ಕಳ ರಕ್ಷಣಾ ನಿರ್ದೇಶನಾಲಯ

1) **ವಿಶೇಷ ಪಾಲನಾ ಯೋಜನೆ:**

ರಾಜ್ಯ ಸರ್ಕಾರದ ವತಿಯಿಂದ ಈ ಯೋಜನೆಯು ಅನುಷ್ಠಾನಗೊಳ್ಳುತ್ತಿದೆ. ಹೆಚ್.ಐ.ವಿ./ಏಡ್ಸ್ ಸೋಂಕಿತ/ಬಾಧಿತ ಮಕ್ಕಳ ಹಾಗೂ ಏಡ್ಸ್‌ನಿಂದ ಪಾಲಕರನ್ನು ಕಳೆದುಕೊಂಡ ಮಕ್ಕಳಿಗೆ ಪೌಷ್ಠಿಕ ಆಹಾರ, ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುವುದರೊಂದಿಗೆ ಅವರನ್ನು ಶಿಕ್ಷಣದ ಮುಖ್ಯವಾಹಿನಿಯಲ್ಲಿ ತರುವುದು ಈ ಯೋಜನೆಯ ಉದ್ದೇಶ. ಯೋಜನೆಯಡಿಯಲ್ಲಿ ಎ.ಆರ್.ಟಿ. ಕೇಂದ್ರಗಳಲ್ಲಿ ನೋಂದಾಯಿತ ಕುಟುಂಬದ ವಿವರಗಳನ್ನು ಪಡೆದು, ಗೃಹ ಅಧ್ಯಯನ ನಡೆಸಿ, ಒಪ್ಪಿಗೆ ಪತ್ರ ಪಡೆದು ಹೆಚ್.ಐ.ವಿ.ಸೋಂಕಿತ / ಬಾಧಿತ ಮಕ್ಕಳಿಗೆ ಆರ್ಥಿಕ ಸಹಾಯವನ್ನು ಪ್ರತಿ ಮಗುವಿಗೆ ಪ್ರತಿ ಮಾಹೆಗೆ ರೂ.1000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒದಗಿಸಲಾಗುತ್ತದೆ. ವೈದ್ಯಕೀಯ, ಪೌಷ್ಠಿಕ ಆಹಾರ, ಶಿಕ್ಷಣ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಒದಗಿಸಲಾಗುತ್ತದೆ.

2021-22ನೇ ಸಾಲಿನಲ್ಲಿ ಒಟ್ಟು 13161 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿದ್ದು, ದಿನಾಂಕ:16-03-2022ರ ಅಂತ್ಯಕ್ಕೆ ಒಟ್ಟು 7966 ಫಲಾನುಭವಿಗಳಿಗೆ ರೂ. 8,87,41,000/- ಗಳ ಅನುದಾನವನ್ನು ನೇರವಾಗಿ ಫಲಾನುಭವಿಗಳ ಖಾತೆಗೆ Direct Benefit Transfer (DBT) ಮುಖಾಂತರ ಜಮೆಗೊಳಿಸಲಾಗಿದೆ.

2) **ಮುಖ್ಯಮಂತ್ರಿ ಬಾಲಸೇವಾ ಯೋಜನೆ :**

- ಕೋವಿಡ್-19ರ ಕಾರಣದಿಂದ ತಂದೆ-ತಾಯಿ ಇಬ್ಬರನ್ನು ಕಳೆದುಕೊಂಡು ವಿಸ್ತೃತ ಕುಟುಂಬದ ಸದಸ್ಯರ ಆರೈಕೆಯಲ್ಲಿರುವ 18 ವರ್ಷದೊಳಗಿನ ಮಕ್ಕಳಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಪ್ರತಿ ತಿಂಗಳು ರೂ.3,500/-ಗಳ ಆರ್ಥಿಕಧನ ಸಹಾಯವನ್ನು ಮಗು ಮತ್ತು ಮಗುವಿನ ಕಾನೂನುಬದ್ಧ ಪೋಷಕರ ಜಂಟಿಖಾತೆಗೆ ನೇರವಾಗಿ ಜಮೆ ಮಾಡಲಾಗುವುದು. 2021-22ನೇ ಆರ್ಥಿಕ ಸಾಲಿನಲ್ಲಿ ಇದುವರೆಗೆ ಈ ಯೋಜನೆಯಡಿ ಒಟ್ಟು 194 ಫಲಾನುಭವಿಗಳಿಗೆ ರೂ 42,69,500/-ಗಳ ಆರ್ಥಿಕ ಸೌಲಭ್ಯವನ್ನು ಒದಗಿಸಲಾಗಿದೆ.
- ಎಸ್.ಎಸ್.ಎಲ್.ಸಿ ಪೂರೈಸಿದ ಮಕ್ಕಳಿಗೆ ಉನ್ನತ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿಗಾಗಿ ಲ್ಯಾಪ್‌ಟಾಪ್ ಅಥವಾ ಟ್ಯಾಬ್ ವಿತರಣೆ ಮಾಡಲು ಯೋಜನೆಯಡಿ ಅವಕಾಶವಿದ್ದು ಈ ಆರ್ಥಿಕ ಸಾಲಿನಲ್ಲಿ ಒಟ್ಟು 47 ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಕಲ್ಪಿಸಲಾಗಿದೆ.

3) **ಬಾಲಹಿತೈಷಿ ಯೋಜನೆ:**

ರಾಜ್ಯದಲ್ಲಿ ಕೋವಿಡ್-19 ನಿಂದ ಇಬ್ಬರು ಅಥವಾ ಏಕ ಪೋಷಕರನ್ನು ಕಳೆದುಕೊಂಡಿರುವ ಮಕ್ಕಳನ್ನು ಮಾನಸಿಕ ಆಘಾತದಿಂದ ಹೊರತರಲು ಮಕ್ಕಳಿಗೆ ನೈತಿಕ, ಭಾವನಾತ್ಮಕ ಹಾಗೂ ಸಾಮಾಜಿಕ ನೆರವನ್ನು ಒದಗಿಸಿ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಬೆಂಬಲ ನೀಡುವ ಸಲುವಾಗಿ ಬಾಲಹಿತೈಷಿ (**ಮಾರ್ಗದರ್ಶಕತ್ವ/ ಮೆಂಟರ್‌ಶಿಪ್**) ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಲಾಗಿದೆ. ಈ ಯೋಜನೆಯಡಿ ಮಕ್ಕಳಿಗೆ ಭಾವನಾತ್ಮಕ, ನೈತಿಕ ಹಾಗೂ ಸಾಮಾಜಿಕ ಬೆಂಬಲವನ್ನು ಒದಗಿಸಲು ಒಬ್ಬ ಮಾರ್ಗದರ್ಶಕರನ್ನು ಮಗುವಿಗೆ ಮಕ್ಕಳ ಕಲ್ಯಾಣ ಸಮಿತಿಯ ಮೂಲಕ ಅನುಸಂಧಾನಿಸುವ ಕಾರ್ಯಕ್ರಮವಾಗಿರುತ್ತದೆ.

2021-22ನೇ ಸಾಲಿನಲ್ಲಿ ದಿನಾಂಕ:15.03.2022ರ ಅಂತ್ಯಕ್ಕೆ ಒಟ್ಟು 3733 ಫಲಾನುಭವಿಗಳು ಯೋಜನಾ ವ್ಯಾಪ್ತಿಗೆ ಒಳಪಡುತ್ತಾರೆ. (277 ಏಕ ಪೋಷಕರ ಮಕ್ಕಳಿಗೆ ಹಾಗೂ 67 ಇಬ್ಬರು ಪೋಷಕರನ್ನು ಕಳೆದುಕೊಂಡಿರುವ ಮಕ್ಕಳಿಗೆ) ಅನುಸಂಧಾನಿಸಲಾಗಿದೆ.

4) **ಬಾಲಮಂದಿರಗಳು:**

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳ ಪ್ರಕರಣಗಳ ವಿಚಾರಣೆ ವೇಳೆಯಲ್ಲಿ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳ ಪಾಲನೆ ಮತ್ತು ರಕ್ಷಣೆಗಾಗಿ ಹಾಗೂ ದೀರ್ಘಾವಧಿ ಪುನರ್ವಸತಿಗಾಗಿ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 50 (1) ರನ್ವಯ ಬಾಲಮಂದಿರಗಳನ್ನು (ಬಾಲಕ/ಬಾಲಕಿಯರ) ಸ್ಥಾಪಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳನ್ನು ಸಮಿತಿಯ ಆದೇಶದನ್ವಯ ಬಾಲಮಂದಿರಗಳಿಗೆ ದಾಖಲು ಮಾಡಿಕೊಳ್ಳಲಾಗುವುದು. ಈ ರೀತಿ ಅಭಿರಕ್ಷಣೆಗೆ ಒಳಪಟ್ಟ ಮಕ್ಕಳಿಗೆ ಮೂಲಭೂತ ಅವಶ್ಯಕತೆಗಳಾದ ಆಹಾರ, ವಸತಿ, ಆರೋಗ್ಯ ಸೇವೆ ಹಾಗೂ ಮನೋರಂಜನೆಯನ್ನು ಒದಗಿಸುವುದರ ಜೊತೆಗೆ ಪುನರ್ವಸತಿಗೆ ಅಗತ್ಯವಾದ ಶಿಕ್ಷಣ ಹಾಗೂ ತರಬೇತಿಯನ್ನು ಒದಗಿಸಲಾಗುವುದು. ಮಕ್ಕಳನ್ನು ವಿದ್ಯಾಭ್ಯಾಸಕ್ಕಾಗಿ ಸರ್ಕಾರಿ ಅಥವಾ ಖಾಸಗಿ ಶಾಲೆ ಮತ್ತು ಕಾಲೇಜುಗಳಿಗೆ ಕಳುಹಿಸಲಾಗುತ್ತದೆ.

ರಾಜ್ಯದಲ್ಲಿ ಒಟ್ಟು 60 ಬಾಲಮಂದಿರಗಳಿದ್ದು, ಇವುಗಳಲ್ಲಿ 30 ಬಾಲಕರಿಗಾಗಿ ಹಾಗೂ 29 ಬಾಲಕಿಯರಿಗಾಗಿ ಹಾಗೂ ಒಂದು ಶಿಶುಮಂದಿರ 6 ವರ್ಷದೊಳಗಿನ ಮಕ್ಕಳಿಗಾಗಿ (ಗಂಡು ಮತ್ತು ಹೆಣ್ಣು ಮಕ್ಕಳಿಗಾಗಿ) ಹಾಗೂ ಒಂದು ಅನುಪಾಲನಾ ಗೃಹ ಬೆಳಗಾವಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

**5) <u>ಅನುಪಾಲನ ಗೃಹ:</u>**

ಬಾಲಮಂದಿರಗಳಿಂದ 18 ವರ್ಷ ಪೂರ್ಣಗೊಂಡ ಮಕ್ಕಳನ್ನು ಬಿಡುಗಡೆ ಮಾಡಬೇಕಾದ ಸಂದರ್ಭದಲ್ಲಿ, ಮಕ್ಕಳ ಕಲ್ಯಾಣ ಸಮಿತಿಯು ಅಂತಹ ಮಕ್ಕಳಿಗೆ ಸಮಾಜದ ಮುಖ್ಯವಾಹಿನಿಯೊಂದಿಗೆ ಬೆರೆಯಲು ಕಾಲಾವಕಾಶ ಅಗತ್ಯವೆಂದು ಅಭಿಪ್ರಾಯಪಟ್ಟಲ್ಲಿ ಅಥವಾ ಇನ್ನಾವುದೇ ಪ್ರಮುಖ ಕಾರಣದಿಂದ ಮಗುವಿಗೆ ಸಂಸ್ಥೆಯ ನೆರವು ಅಗತ್ಯವಿದ್ದು, ಅಂತಹ ಮಕ್ಕಳಿಗೆ ಅನುಪಾಲನಾ ಸೇವೆಗಾಗಿ ಆದೇಶ ಮಾಡಿದಲ್ಲಿ ಗಂಡು ಮಕ್ಕಳನ್ನು ಪುರುಷ ಅನುಪಾಲನಾ ಗೃಹಗಳಿಗೆ ಹಾಗೂ ಹೆಣ್ಣು ಮಕ್ಕಳನ್ನು ರಾಜ್ಯ ಮಹಿಳಾ ನಿಲಯಗಳಿಗೆ ದಾಖಲೆ ಮಾಡಲಾಗುವುದು.

**6) <u>ವೀಕ್ಷಣಾಲಯ:</u>**

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಸೆಕ್ಷನ್ 47 ರಲ್ಲಿ ವೀಕ್ಷಣಾಲಯಗಳು ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ ಮಕ್ಕಳು, ಅವರ ವಿರುದ್ಧದ ವಿಚಾರಣೆ ಬಾಕಿ ಇರುವ ಅವಧಿಯಲ್ಲಿ ತಾತ್ಕಾಲಿಕವಾಗಿ ಅಭಿರಕ್ಷಣೆ ಒದಗಿಸುವ ಸಂಸ್ಥೆಗಳಾಗಿರುತ್ತವೆ. ಭಾರತೀಯ ದಂಡ ಸಂಹಿತೆ ಹಾಗೂ ಇತರೆ ಶಾಸನಗಳನ್ವಯ ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ 18 ವರ್ಷದೊಳಗಿನ ಮಕ್ಕಳ ಪ್ರಕರಣಗಳನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ 2015ರ ಸೆಕ್ಷನ್ (4)ರಡಿ ಸ್ಥಾಪಿಸಿರುವ ಬಾಲ ನ್ಯಾಯ ಮಂಡಳಿಯ ಮುಂದೆ ಹಾಜರುಪಡಿಸಲಾಗುವುದು.

**7) <u>ಪ್ಲೇಸ್ ಆಫ್ ಸೇಫ್ಟಿ:</u>**

ಕಾನೂನು ಸಂಘರ್ಷಕ್ಕೊಳಪಟ್ಟು ಗಂಭೀರ ಪ್ರಕರಣಗಳನ್ನು ಎದುರಿಸುತ್ತಿರುವ 16 ರಿಂದ 18 ವರ್ಷದೊಳಗಿನ ಮಕ್ಕಳನ್ನು ವಿಚಾರಣಾ ಪ್ರಕ್ರಿಯೆ ಪೂರ್ಣಗೊಳ್ಳುವ ತನಕ ಮತ್ತು ಅಪರಾಧವೆಸಗಿರುವ ಅಪರಾಧಿಗಳನ್ನು ಇರಿಸಲು ಸುರಕ್ಷಿತ ಸ್ಥಳದ ವ್ಯವಸ್ಥೆ ಮಾಡಲು ಬಾಲ ನ್ಯಾಯ ಕಾಯಿದೆ, 2015ರ ಕಲಂ 49(1)ರಲ್ಲಿ ತಿಳಿಸಲಾಗಿದೆ.

**8) <u>ಮಕ್ಕಳ ಸಹಾಯವಾಣಿ 1098:</u>**

ಇದು ರಾಷ್ಟ್ರ ವ್ಯಾಪ್ತಿಯಲ್ಲಿ ಚಾಲ್ತಿಯಲ್ಲಿರುವ ಮಕ್ಕಳ ಸಹಾಯವಾಣಿ. ಸಂಕಷ್ಟದಲ್ಲಿ ಸಿಲುಕಿರುವ / ರಕ್ಷಣೆ ಮತ್ತು ಪೋಷಣೆಗೆ ಅವಶ್ಯಕತೆ ಇರುವ ಮಕ್ಕಳಿಗೆ ತುರ್ತು ಸೇವೆಯನ್ನು ಒದಗಿಸಲು ಈ ಸಂಖ್ಯೆಗೆ ಕರೆ ಮಾಡುವ ಮೂಲಕ ನೆರವು ಪಡೆಯಬಹುದಾಗಿದೆ. ಈ ಸಂಖ್ಯೆಯು ಉಚಿತ ದೂರವಾಣಿಯಾಗಿದ್ದು ಮಕ್ಕಳಾಗಲಿ ಅಥವಾ ಸಾರ್ವಜನಿಕರಾಗಲಿ ಕರೆ ಮಾಡುವ ಮೂಲಕ ತುರ್ತು ನೆರವು ಅಗತ್ಯವಿರುವ ಮಕ್ಕಳಿಗೆ ರಕ್ಷಣೆಯನ್ನು ಒದಗಿಸಬಹುದಾಗಿದೆ.

**9) <u>ಉಚಿತ ಆಪ್ತ ಸಮಾಲೋಚನೆ 14499:</u>**

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ಯೂನಿಸೆಫ್ ಸಹಯೋಗದಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಮಕ್ಕಳಿಗಾಗಿ ದೂರವಾಣಿ ಆಪ್ತ-ಸಮಾಲೋಚನೆ ನೀಡಲು "ಟೋಲ್-ಫ್ರೀ14499" ಅನ್ನು ಸ್ಥಾಪಿಸಲಾಗಿದೆ. "ಟೆಲಿ-ಆಪ್ತಸಮಾಲೋಚನೆ"ಗೆ ಆಪ್ತ ಸಮಾಲೋಚನೆ ಬಯಸುವ ಕರ್ನಾಟಕದಲ್ಲಿನ ಎಲ್ಲಾ ಮಕ್ಕಳು ಹಾಗೂ ಮಕ್ಕಳಿಗಾಗಿ ಮಕ್ಕಳ ಪೋಷಕರು ಸಹ 14499 ಸಂಖ್ಯೆಗೆ ಕರೆ ಮಾಡುವ ಮೂಲಕ ಉಚಿತವಾಗಿ ಆಪ್ತ ಸಮಾಲೋಚನೆ ಸೌಲಭ್ಯ ಪಡೆಯಬಹುದು.

**10) ತೆರೆದ ತಂಗುದಾಣಗಳು:**

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಸೆಕ್ಷನ್ 47 ರಲ್ಲಿ ನಗರ ಮತ್ತು ಅರೆ ನಗರ ಪ್ರದೇಶಗಳಲ್ಲಿ ಕುಟುಂಬದ ಬೆಂಬಲ ಇಲ್ಲದ, ಪಾಲನೆ ಮತ್ತು ರಕ್ಷಣೆಯ ಅಗತ್ಯವುಳ್ಳ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಬೆಂಬಲ ಒದಗಿಸುವುದೇ ಈ ಕಾರ್ಯಕ್ರಮದ ಗುರಿಯಾಗಿರುತ್ತದೆ – ಮುಖ್ಯವಾಗಿ ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು, ಚಿಂದಿ ಆಯುವ ಮಕ್ಕಳು, ಬೀದಿ ಮಕ್ಕಳು, ಕೆಲಸ ಮಾಡುವ ಮಕ್ಕಳು, ಅನಾಥ ಮಕ್ಕಳು, ಸಾಗಾಣಿಕೆಯಾದ ಮಕ್ಕಳು, ಪರಿತ್ಯಜಿಸಲ್ಪಟ್ಟ ಮಕ್ಕಳು, ಶೋಷಣೆ, ದೌರ್ಜನ್ಯಕ್ಕೆ ಒಳಗಾದ ಬೀದಿ ಮಕ್ಕಳು ಹಾಗೂ ವಲಸೆ ಬಂದವರ ಮಕ್ಕಳು ಮತ್ತು ರಸ್ತೆ ಬದಿಯಲ್ಲಿ ವಾಸಿಸುವವರ ಮಕ್ಕಳ ಪುನರ್ವಸತಿ ಮಾಡಲಾಗುತ್ತದೆ.

## ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ಉದ್ಯೋಗಿನಿ
2. ಕಿರುಸಾಲ
3. ಸಮೃದ್ಧಿ (2020–221ನೇ ಸಾಲಿನಿಂದ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ)
4. ಚೇತನ
5. ಧನಶ್ರೀ
6. ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ
7. ಮಹಿಳಾ ತರಬೇತಿ
8. ಬಡ್ಡಿ ಸಹಾಯಧನ ಯೋಜನೆ (ಕೆ.ಎಸ್.ಎಫ್.ಸಿ ಮೂಲಕ)
9. ದೇವದಾಸಿ ಪುನರ್ವಸತಿ ಯೋಜನೆ
10. ಮಾಜಿ ದೇವದಾಸಿಯರ ಮಾಸಾಶನ ಯೋಜನೆ
11. ಮಾಜಿ ದೇವದಾಸಿಯರ ವಸತಿ ಯೋಜನೆ (2020–21ನೇ ಸಾಲಿನಿಂದ ಅನುದಾನ ಒದಗಿಸಿರುವುದಿಲ್ಲ)

ಸರ್ಕಾರದಿಂದ ಹಂಚಿಕೆಯಾಗಿ, ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ, ಯೋಜನೆಗಳ ಅನುಷ್ಠಾನಕ್ಕೆ ಕ್ರಮವಹಿಸಲಾಗಿರುತ್ತದೆ.

***********

## ಅನುಬಂಧ-2

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

1. ರಾಜ್ಯ ಐ.ಸಿ.ಡಿ.ಎಸ್. ಘಟಕ
2. ಜಿಲ್ಲಾ ಐಸಿಡಿಎಸ್ ಘಟಕ
3. 204 ಶಿಶು ಅಭಿವೃದ್ಧಿ ಯೋಜನೆಗಳು:-
4. ಪೂರಕ ಪೌಷ್ಟಿಕ ಆಹಾರ
5. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ತರಬೇತಿ ಕಾರ್ಯಕ್ರಮ
6. ಪ್ರಾಯಪೂರ್ವ ಬಾಲಕಿಯರ ಯೋಜನೆ -(SAG)
7. ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ
8. ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆ
9. ಅಂಗನವಾಡಿ ಕಟ್ಟಡಗಳ ಉನ್ನತೀಕರಣ (ರಾಜ್ಯ ವಲಯ)
10. ರಾಷ್ಟ್ರೀಯ ಪೌಷ್ಟಿಕತೆ ಅಭಿಯಾನ-ಪೋಷಣ್ ಅಭಿಯಾನ
11. ಬೇಟಿ ಬಚಾವೋ ಬೇಟಿ ಪಡಾವೋ
12. ಸಖಿ – ಒನ್ ಸ್ಟಾಪ್ ಸೆಂಟರ್
13. ಸ್ವಾಧಾರ ಗೃಹ
14. ಉಜ್ವಲ ಯೋಜನೆ

- **ಕಾರ್ಯಕ್ರಮಗಳ ಪ್ರಕ್ರಿಯೆಗಳ ವಿವರ:-** ಈ ಮೇಲೆ ವಿವರಿಸಲಾಗಿರುವ ಕಾರ್ಯಕ್ರಮಗಳು ಕೇಂದ್ರ ಪುರಸ್ಕೃತ ಯೋಜನೆಗಳಾಗಿದ್ದು, ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಅನುಮೋದನೆಯಾಗುವ ಎ.ಪಿ.ಐ.ಪಿ. (ವಾರ್ಷಿಕ ಕಾರ್ಯಕ್ರಮಗಳ ಅನುಷ್ಠಾನ ಯೋಜನೆ- Annual Programme Implementation Plan) ಯನ್ವಯ ಬಿಡುಗಡೆಯಾಗುವ ಅನುದಾನಕ್ಕೆ ಅನುಗುಣವಾಗಿ ವೆಚ್ಚ ಭರಿಸಲು ಕ್ರಮವಹಿಸಲಾಗುತ್ತಿದೆ.

## ಮಕ್ಕಳ ರಕ್ಷಣಾ ನಿರ್ದೇಶನಾಲಯ

**1) ಪ್ರಾಯೋಜಕತ್ವಕಾರ್ಯಕ್ರಮ:**

ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿಯೊಂದು ಮಗುವು ಕುಟುಂಬದಲ್ಲಿ ಬೆಳೆಯುವುದು ಮಗುವಿನ ಹಕ್ಕು ಎಂಬುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ. ಕುಟುಂಬದ ವಾತಾವರಣವನ್ನು ಉತ್ತಮಪಡಿಸುವ ಸಲುವಾಗಿ ಮಕ್ಕಳು ದುಡಿಮೆಗೆ ಹೋಗುವುದನ್ನು ತಪ್ಪಿಸಿ ಶಿಕ್ಷಣವನ್ನು ಮುಂದುವರಿಸುವುದನ್ನು ಉತ್ತೇಜಿಸಲು ಹಾಗೂ ವೈದ್ಯಕೀಯ, ಪೌಷ್ಟಿಕ ಆಹಾರ, ವೃತ್ತಿ ತರಬೇತಿ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಒದಗಿಸಲಾಗುತ್ತದೆ. ತಿಂಗಳಿಗೆ ರೂ.1000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒಂದು ಕುಟುಂಬದಲ್ಲಿನ ಗರಿಷ್ಠ 2 ಮಕ್ಕಳಿಗೆ ಗರಿಷ್ಠ ಮೂರು ವರ್ಷಗಳ ಅವಧಿಗೆ ಅಥವಾ ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಈ ಸೌಲಭ್ಯವನ್ನು ನೀಡಲು ಕ್ರಮವಹಿಸಲಾಗುತ್ತಿದೆ.

2021-22ನೇ ಆರ್ಥಿಕ ಸಾಲಿನಲ್ಲಿ ಈ ಯೋಜನೆಯಡಿ ಒಟ್ಟಾರೆ 3682 ಫಲಾನುಭವಿಗಳಿಗೆ ರೂ.3,09,38,000/-ಗಳ ಆರ್ಥಿಕ ಸೌಲಭ್ಯವನ್ನು ಒದಗಿಸಲಾಗಿದೆ.

2) **"PM CARES for Children" ಯೋಜನೆ:**

ದಿನಾಂಕ: 11.03.2020 ರ ನಂತರದಲ್ಲಿ ಕೋವಿಡ್-19 ರಿಂದ ಪೋಷಕರಿಬ್ಬರನ್ನು ಕಳೆದುಕೊಂಡಂತಹ ಎಲ್ಲಾ ಮಕ್ಕಳಿಗೆ ಕೇಂದ್ರ ಸರ್ಕಾರದ"PM CARES for Children" ಯೋಜನೆಯಡಿಯಲ್ಲಿಯೂ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಸದರಿ ಯೋಜನೆಯನ್ನು ಕರ್ನಾಟಕ ರಾಜ್ಯದಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ರಾಜ್ಯದ 216 ಫಲಾನುಭವಿಗಳು ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಸದರಿ ಯೋಜನೆಯ ಸೌಲಭ್ಯವನ್ನು ಫಲಾನುಭವಿಗಳಿಗೆ ಒದಗಿಸಲು ಮಾನ್ಯ ಜಿಲ್ಲಾಧಿಕಾರಿಗಳ ಪದನಾಮ ಮತ್ತು ಫಲಾನುಭವಿಗಳ (18ವರ್ಷದೊಳಗಿನ) ಜಂಟಿಖಾತೆಯನ್ನು ಅಂಚೆ ಕಛೇರಿಯಲ್ಲಿ ತೆರೆಯಬೇಕಾಗಿರುತ್ತದೆ.

ಈ ಯೋಜನೆಯಡಿಯಲ್ಲಿ ಒಟ್ಟು 204 ಫಲಾನುಭವಿಗಳ ಜಂಟಿ ಖಾತೆಯನ್ನು ಮತ್ತು 12 ಫಲಾನುಭವಿಗಳ (18ವರ್ಷ ಮೇಲ್ಪಟ್ಟ) **Single Account** ಖಾತೆಯನ್ನು ಅಂಚೆ ಕಛೇರಿಯಲ್ಲಿ ತೆರೆಯಲಾಗಿದೆ.

*******

## ಅನುಬಂಧ: 3

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ | 2018–19 | | 2019–20 | | 2020–21 | |
|---|---|---|---|---|---|---|---|
| | | ಒದಗಿಸಲಾದ ಅನುದಾನ | ಬಳಕೆಯಾದ ಅನುದಾನ | ಒದಗಿಸಲಾದ ಅನುದಾನ | ಬಳಕೆಯಾದ ಅನುದಾನ | ಒದಗಿಸಲಾದ ಅನುದಾನ | ಬಳಕೆಯಾದ ಅನುದಾನ |
| 1 | ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ತರಬೇತಿ (CSS)(60:40) 2235-02-102-0-05-015 | 1000.00 | 397.34 | 465.39 | 465.39 | 349.17 | 204.59 |
| 2 | ಉದ್ಯೋಗಿ ಮಾತೆಯರ ಮಕ್ಕಳಿಗಾಗಿ ಶಿಶುವಿಹಾರಗಳು (CSS:SS–60:40) 2235-02-102-0-13 | 914.00 | 0.00 | 1105.98 | 962.99 | 636.00 | 590.37 |
| 3 | ಪೋಷಣ ಅಭಿಯಾನ (ರಾಷ್ಟ್ರೀಯ ಪೌಷ್ಠಿಕಾಂಶ ಅಭಿಯಾನ) 2235–02–102–0–43 | 8757.58 | 8757.58 | 12972.15 | 6575.69 | 12500.00 | 5821.28 |
| 4 | ಪ್ರಾಯಪೂರ್ವ ಬಾಲಕಿಯರ ಸಬಲೀಕರಣ ರಾಜೀವ್ ಗಾಂಧಿ ಯೋಜನೆ (ಸಬಲ) ಪೌಷ್ಠಿಕಾಂಶ (CSS: SS - 50:50) & ಪೌಷ್ಠಿಕೇತರಾಂಶ (CSS: SS - 60:40) 2235-02-103-0-48 | 423.00 | 12.66 | 200.00 | 75.27 | 112.83 | 15.55 |
| 5 | ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ (CSS: SS – 60:40) 2235-02-103-0-61-059 | 10000.00 | 7228.17 | 5710.00 | 22982.74 | 8423.99 | 20227.79 |
| 6 | ಅಂಗನವಾಡಿ ಕಟ್ಟಡಗಳ ಉನ್ನತೀಕರಣ 4235-02-102-1-03-125 | 1738.40 | 1409.40 | 1749.40 | 1643.78 | 0.00 | 0.00 |
| 7 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಜಿಲ್ಲಾ ಘಟಕ) (CSS:SS – 60:40) 2211-00-102-0-02 | 985.00 | 919.44 | 1282.00 | 1094.40 | 1325.38 | 1308.34 |
| 8 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (204 ಶಿಶು ಅಭಿವೃದ್ಧಿ ಯೋಜನೆಯ ಆಡಳಿತ ವೆಚ್ಚ) (2211-00-102-0-22 (TP) CSS:SS - 60:40) | 125906.32 | 112323.71 | 160537.00 | 143276.12 | 160281.77 | 159663.37 |
| 9 | ಶಾಲಾ ಪೂರ್ವ ಮಕ್ಕಳ ಊಟದ ಯೋಜನೆ 2235-00-101-0-61 (TP) (CSS: SS - 50:50) | 215042.00 | 156487.68 | 215042.00 | 147736.28 | 197174.53 | 194697.49 |
| 10 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (H.O. Cell) 2235-02-102-0-04 | 967.00 | 314.77 | 614.75 | 214.98 | 278.33 | 209.21 |
| 11 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಗಳನ್ನು ಭರಿಸುವ ಬಗ್ಗೆ (ಬಾಲಸಂಜೀವಿನಿ) 2235-02-102-0-30 | 200.00 | 166.94 | 200.00 | 163.20 | 200.00 | 148.84 |
| 12 | ಅಂಗನವಾಡಿಗಳ ನಿರ್ವಹಣೆ2235-02-102-0-40 (CSS: SS - 60:40) | 2.00 | 0.00 | 3451.58 | 2302.04 | 1979.00 | 1952.64 |

| | | | | | | | |
|---|---|---|---|---|---|---|---|
| 13 | ನಗರ ಅಂಗನವಾಡಿಗಳ ಮೇಲ್ದರ್ಜೆಕರಣ 2235-02-102-0-44 | 0.00 | 0.00 | 300.00 | 61.92 | 300.00 | 129.68 |
| 14 | ಮಾತೃಶ್ರೀ ಯೋಜನೆ 2235-02-103-0-58 | 25000.00 | 516.72 | 22290.00 | 7824.29 | 0.00 | 0.00 |
| 15 | ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಮರಣ ಪರಿಹಾರ ನಿಧಿ 2235-02-103-0-99-100 | 60.00 | 58.11 | 181.95 | 177.46 | 100.00 | 99.22 |
| 16 | ಅಂಗನವಾಡಿ ಕಾರ್ಯಕರ್ತೆಯರಿಗೆ ನೂತನ ಪಿಂಚನೆ ವ್ಯವಸ್ಥೆ 2235-60-103-0-01 | 1512.00 | 1299.76 | 1000.00 | 1000.00 | 1000.00 | 1000.00 |
| 17 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಆರ್‌ಐಡಿಎಫ್-ನಬಾರ್ಡ್) 4235-02-102-0-01-436 | 4338.00 | 1154.27 | 50.00 | 0.00 | 5000.00 | 5000.00 |
| 18 | ಅಂಗನವಾಡಿ ಕಟ್ಟಡಗಳು ವಿಶೇಷ ಅಭಿವೃದ್ಧಿ ಯೋಜನೆ 4235-02-102-0-02-133 | 3600.00 | 3598.00 | 3600.00 | 3597.50 | 10775.00 | 10765.00 |
| 19 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ 4235-02-102-0-05 | 0.00 | 0.00 | 0.00 | 0.00 | 332.00 | 330.00 |
| 20 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐ.ಸಿ.ಡಿ.ಎಸ್. - ನರೇಗ) 4235-02-102-0-06 | 3900.00 | 684.79 | 375.00 | 370.00 | 500.00 | 500.00 |
| 21 | ಅಂಗನವಾಡಿ ಕಟ್ಟಡ ನಿರ್ವಹಣೆ ಮತ್ತು ದುರಸ್ತಿ (TP) 2211-00-102-0-61 | 2649.00 | 2333.49 | 2476.00 | 1601.28 | 2500.00 | 2500.00 |
| 22 | ಸ್ತ್ರೀಶಕ್ತಿ ಯೋಜನೆ 2235-02-103-0-41 | 1470.00 | 1224.64 | 1079.00 | 798.04 | 507.03 | 466.78 |
| 23 | ಸಾಂತ್ವನ ಯೋಜನೆ 2235-02-103-0-99-100 | 729.00 | 725.03 | 1380.00 | 1256.57 | 1200.00 | 1195.00 |
| 24 | ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 2235-02-103-0-52 | 733.52 | 718.14 | 723.50 | 701.20 | 706.67 | 636.57 |
| 25 | ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ 2235-02-103-0-62 | 0.00 | 0.00 | 1.00 | 0.45 | 0.00 | 0.00 |
| 26 | ಸ್ವಾಧಾರಗೃಹ ಯೋಜನೆ (ಕೇಂದ್ರ:60% - ರಾಜ್ಯ:40%) 2235-02-103-0-64 | 0.00 | 0.00 | 384.83 | 384.83 | 454.75 | 454.75 |
| 27 | ಸಖಿ-ಒನ್ ಸ್ಟಾಪ್ ಸೆಂಟರ್ (ಕೇಂದ್ರ-100%) 2235-02-102-0-42 | 0.00 | 0.00 | 749.02 | 379.14 | 575.46 | 468.85 |
| 28 | ಭಾಗ್ಯಲಕ್ಷ್ಮೀ ಯೋಜನೆ 2235-02-102-0-25 | 29443.00 | 29427.46 | 29442.00 | 29442.00 | 10000.00 | 4681.70 |
| 29 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ಯೋಜನೆ 2235-02-102-0-24 | 50.00 | 50.00 | 30.00 | 29.77 | 30.00 | 17.00 |

| | | | | | | | |
|---|---|---|---|---|---|---|---|
| 30 | ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ 2235–02–102–0–27 | 44.00 | 43.82 | 30.00 | 25.36 | 30.00 | 21.72 |
| 31 | ಉಜ್ವಲ ಯೋಜನೆ 2235–02–103–0–67 | 320.00 | 186.43 | 100.00 | 68.58 | 297.20 | 183.01 |
| 32 | ಬೇಟಿ ಬಚಾವೋ ಬೇಟಿ ಪಡಾವೋ 2235–02–102–0–41 | 300.00 | 82.44 | 125.00 | 99.71 | 125.00 | 106.51 |
| 33 | ಬಾಲ್ಯವಿವಾಹ ನಿಷೇಧ ಕಾಯ್ದೆ ಅನುಷ್ಠಾನ 2235–02–001–0–01–051 | 150.00 | 149.92 | 150.00 | 134.06 | 175.00 | 0.00 |
| 34 | ರಾಜ್ಯ ಮಹಿಳಾ ನಿಲಯ/ಸ್ವೀಕಾರ ಕೇಂದ್ರ; 2235–02–106–0–06 | 704.50 | 701.17 | 682.35 | 680.78 | 678.82 | 676.97 |
| 35 | ಸುಧಾರಣಾ ಸಂಸ್ಥೆಗಳ ಕಟ್ಟಡ ನಿರ್ಮಾಣ: 4235–02–106–1–01–139 | 300.00 | 300.00 | 300.00 | 300.00 | 50.00 | 36.54 |
| 36 | ಸುಧಾರಣಾ ಸಂಸ್ಥೆಗಳ ದುರಸ್ತಿ ಹಾಗೂ ನಿರ್ವಹಣೆ: 2235–02–106–0–05–132 | 55.00 | 55.00 | 20.00 | 20.00 | 0.00 | 0.00 |
| 37 | ನಿರ್ಗತಿಕ ಮಕ್ಕಳ ಕುಟೀರ: 2211–00–102–0–26 | 941.09 | 479.85 | 789.00 | 480.57 | 599.65 | 167.90 |
| 38 | ಬಾಲಕಿಯರ ವಸತಿ ನಿಲಯ: 2235–02–103–0–99–100 | 475.00 | 474.68 | 509.45 | 501.17 | 257.20 | 251.70 |

## ಮಕ್ಕಳ ರಕ್ಷಣಾ ನಿರ್ದೇಶನಾಲಯ

| ಕ್ರಸಂ | ಯೋಜನೆ/ ಕಾರ್ಯಕ್ರಮಗಳ ಹೆಸರು | 2018–19 ರೂ. ಲಕ್ಷಗಳಲ್ಲಿ | | | | 2019–20 ರೂ. ಲಕ್ಷಗಳಲ್ಲಿ | | | | 2020–21 ರೂ. ಲಕ್ಷಗಳಲ್ಲಿ | | | |
|---|---|---|---|---|---|---|---|---|---|---|---|---|---|
| | | ಒದಗಿಸಲಾದ ಅನುದಾನ | ಬಿಡುಗಡೆ | ಫಲಾನುಭವಿಗಳ ಸಂಖ್ಯೆ | ಈವರೆಗೆ ಸಾಧಿಸಿರುವ ಪ್ರಗತಿ | ಒದಗಿಸಲಾದ ಅನುದಾನ | ಬಿಡುಗಡೆ | ಫಲಾನುಭವಿಗಳ ಸಂಖ್ಯೆ | ಈವರೆಗೆ ಸಾಧಿಸಿರುವ ಪ್ರಗತಿ | ಒದಗಿಸಲಾದ ಅನುದಾನ | ಬಿಡುಗಡೆ | ಫಲಾನುಭವಿಗಳ ಸಂಖ್ಯೆ | ಈವರೆಗೆ ಸಾಧಿಸಿರುವ ಪ್ರಗತಿ |
| 1 | ವಿಶೇಷ ಪಾಲನಾ ಯೋಜನೆ | 1500.00 | 1500.00 | 19300 | 100% | 1500.00 | 1500.00 | 17548 | 100% | 1500.00 | 1500.00 | 16749 | 100% |
| 2 | ಪ್ರಾಯೋಜಕತ್ವ ಕಾರ್ಯಕ್ರಮ | 300.00 | 300.00 | 3217 | 100% | 300.00 | 241.16 | 2631 | 100%. | 300.00 | 327.31 | 3319 | 100% |
| 3 | ತೆರೆದ ತಂಗುದಾಣ | 593.32 | 566.25 | 1098 | 95% | **619.19 (504.00 ಲಕ್ಷ ಬಿಡುಗಡೆಯಾಗಿದ್ದು ಹಿಂದಿನ ಉಳಿಕೆ ಸೇರಿದಂತೆ ವೆಚ್ಚ ಭರಿಸಿದೆ)** | 619.19 | 893 | 100% | 661.34 | 524.57 | 286 | 79% |
| 4 | (ಎನ್.ಜಿ.ಓ ರನ್ ಚಿಲ್ಡ್ರನ್ ಹೋಮ್ಸ್) ಅರ್ಹ ಸೌಲಭ್ಯ ವಿಶೇಷ ಗೃಹ ಸೇರಿದಂತೆ | 202.00 | 93.66 | 188 | 47% | 164.65 | 153.30 | 277 | 93% | 236.65 | 148.34 | 235 | 62% |
| 5 | ಬಾಲಮಂದಿರಗಳು | 4778.63 | 4045.94 | 2586 | 85% | 5536.67 | 4931.80 | 2512 | 89% | 4995.27 | 4716.85 | 1790 | 94% |
| 6 | ವೀಕ್ಷಣಾಲಯಗಳು | | | | | | | | | | | | |
| 7 | ಪ್ಲೇಸ್ ಆಫ್ ಸೇಫ್ಟಿ | | | | | | | | | | | | |
| 8 | ಶಿಶುಮಂದಿರ | | | | | | | | | | | | |
| | **Total** | 7373.95 | 6505.85 | 26389 | 88% | 8120.51 | 7445.45 | 23861.00 | 91% | 7693.26 | 7217.07 | 22093.00 | 93% |

# ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

| ಕ್ರಸಂ | ಯೋಜನೆಯ ಹೆಸರು | 2018–19 | | 2019–20 | | 2020–21 | |
|---|---|---|---|---|---|---|---|
| | | ಒದಗಿಸಿರುವ ಅನುದಾನ | ಸಾಧಿಸಿದ ಪ್ರಗತಿ | ಒದಗಿಸಿರುವ ಅನುದಾನ | ಸಾಧಿಸಿದ ಪ್ರಗತಿ | ಒದಗಿಸಿರುವ ಅನುದಾನ | ಸಾಧಿಸಿದ ಪ್ರಗತಿ |
| 1 | ಉದ್ಯೋಗಿನಿ | 2530.00 | 2530.00 | 2530.00 | 2530.00 | 2000.00 | 1000.00 |
| 2 | ಕಿರುಸಾಲ | 500.00 | 390.00 | 500.00 | 416.00 | 2500.00 | 650.00 |
| 3 | ಸಮೃದ್ಧಿ (2020–21ನೇ ಸಾಲಿನಿಂದ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ) | 500.00 | 400.00 | 300.00 | 250.00 | 0 | 0.00 |
| 4 | ಚೇತನ | 205.00 | 205.00 | 205.00 | 205.00 | 400.00 | 263.90 |
| 5 | ಧನಶ್ರೀ | 500.00 | 500.00 | 500.00 | 500.00 | 200.00 | 200.00 |
| 6 | ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ | 410.00 | 329.80 | 410.00 | 359.82 | 300.00 | 230.40 |
| 7 | ಮಹಿಳಾ ತರಬೇತಿ | 500.00 | 450.00 | 350.00 | 350.00 | 100.00 | 0.00 |
| 8 | ಬಡ್ಡಿ ಸಹಾಯಧನ ಯೋಜನೆ (ಕೆ.ಎಸ್.ಎಫ್.ಸಿ ಮೂಲಕ) | 3294.00 | 3294.00 | 1000.00 | 1000.00 | 5000.00 | 2550.00 |
| 9 | ದೇವದಾಸಿ ಪುನರ್ವಸತಿ ಯೋಜನೆ | 700.00 | 700.00 | 830.00 | 830.00 | 614.00 | 614.00 |
| 10 | ಮಾಜಿ ದೇವದಾಸಿಯರ ಮಾಸಾಶನ ಯೋಜನೆ | 4772.00 | 4772.00 | 4772.00 | 4772.00 | 5423.40 | 5423.40 |
| 11 | ಮಾಜಿ ದೇವದಾಸಿಯರ ವಸತಿ ಯೋಜನೆ (2020–21ನೇ ಸಾಲಿನಿಂದ ಅನುದಾನ ಒದಗಿಸಿರುವುದಿಲ್ಲ) | 1585.00 | 1188.75 | 1417.00 | 1417.00 | 0 | 0.00 |
| | ಒಟ್ಟು | **15496.00** | **14759.55** | **12814.00** | **12629.82** | **16537.40** | **10931.70** |

*******